# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 685(629) |
| **ಮಾನ್ಯ ಸದಸ್ಯರ ಹೆಸರು** | ಡಾ. ತಳವಾರ್ ಸಾಬಣ್ಣ<br>(ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 18.08.2025 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯಿದೆ 2000 ರ ಪ್ರಕಾರ ಸಿಂಡಿಕೇಟ್ ಸದಸ್ಯರನ್ನು ಸ್ಥಳೀಯ ಪರೀಕ್ಷಣಾ ಸಮಿತಿಗೆ (LIC) ನೇಮಕ ಮಾಡಲು ಅವಕಾಶವಿದೆಯೇ: | ಅವಕಾಶವಿರುವುದಿಲ್ಲ. |
| (ಆ) | ಸಂಪೂರ್ಣವಾಗಿ ಶೈಕ್ಷಣಿಕ ಹಿನ್ನಲೆ ಇಲ್ಲದಿದ್ದರೂ ವಿಶ್ವವಿದ್ಯಾಲಯಗಳು ಒತ್ತಡಕ್ಕೆ ಮಣಿದು ಸಿಂಡಿಕೇಟ್ ಸದಸ್ಯರನ್ನು ಎಲ್‌ಐಸಿಯ ಅಧ್ಯಕ್ಷರನ್ನಾಗಿ ಮತ್ತು ಪ್ರಾಧ್ಯಾಪಕರನ್ನು ಸದಸ್ಯರನ್ನಾಗಿ ಮಾಡುವುದು ಸರಿಯಾದ ಕ್ರಮವೆ: | ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಹಾಗೂ ಯುಜಿಸಿ ರೆಗ್ಯೂಲೇಷನ್ಸ್‌ನಲ್ಲಿ ಸಿಂಡಿಕೇಟ್ ಸದಸ್ಯರನ್ನು ಎಲ್‌ಐಸಿಯ ಅಧ್ಯಕ್ಷರನ್ನಾಗಿ ಮತ್ತು ಸದಸ್ಯರನ್ನಾಗಿ ನೇಮಕ ಮಾಡಲು ಯಾವುದೇ ಅವಕಾಶವನ್ನು ಕಲ್ಪಿಸಿರುವುದಿಲ್ಲ.<br><br>ಆದಾಗ್ಯೂ ಹಲವು ವಿಶ್ವವಿದ್ಯಾಲಯಗಳು ಸಿಂಡಿಕೇಟ್ ಸದಸ್ಯರನ್ನು ಎಲ್‌ಐಸಿಯ ಅಧ್ಯಕ್ಷರನ್ನಾಗಿ ಮತ್ತು ಸದಸ್ಯರನ್ನಾಗಿ ನೇಮಕ ಮಾಡುತ್ತಿದ್ದು, ಈ ಬಗ್ಗೆ ಸರ್ಕಾರದಲ್ಲಿ ಹಲವಾರು ದೂರುಗಳು ಸ್ವೀಕೃತವಾಗಿರುತ್ತವೆ ಹಾಗೂ ಪ್ರಸ್ತಾಪಿತ ವಿಷಯದ ಕುರಿತು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣವು ದಾಖಲಾಗಿದ್ದು, ಸದರಿ ಪ್ರಕರಣದಲ್ಲಿ ರಾಜ್ಯ ಸರ್ಕಾರವು ಅಗತ್ಯ ದಾಖಲಾತಿಗಳೊಂದಿಗೆ ಆಕ್ಷೇಪಣಾ ಹೇಳಿಕೆಯನ್ನು ದಾಖಲಿಸಲಾಗಿರುತ್ತದೆ.<br><br>ಈ ಎಲ್ಲಾ ಅಂಶಗಳನ್ನು ಅವಲೋಕಿಸಿ, ಸಾಮಾಜಿಕ ಮತ್ತು ನೈಸರ್ಗಿಕ ನ್ಯಾಯದ ಪರಿಪಾಲನೆಯೊಂದಿಗೆ ಶೈಕ್ಷಣಿಕ ಹಿರಿಮೆಯನ್ನು ಸಾಧಿಸಲು ಹಾಗೂ - ಶಿಕ್ಷಣ ಗುಣಮಟ್ಟವನ್ನು ವೃದ್ಧಿಸಲು ಅವಶ್ಯಕವಾದ ನ್ಯಾಯೋಚಿತ, ಪಾರದರ್ಶಕ ಹಾಗೂ ನಿಷ್ಪಕ್ಷಪಾತ ಸಂಯೋಜನೆ ಪ್ರಕ್ರಿಯೆ ರೂಪಿಸಬೇಕಾಗಿದ್ದಲ್ಲಿ ಸ್ಥಳೀಯ ವಿಚಾರಣಾ ಸಮಿತಿಗಳಿಗೆ ವಿಷಯ ಪಾರಂಗತರನ್ನು ಹಾಗೂ ಶೈಕ್ಷಣಿಕ ತಜ್ಞರನ್ನು ನೇಮಿಸುವ ಅವಶ್ಯಕತೆಯನ್ನು ಮನಗಂಡು, ರಾಜ್ಯದ ವಿಶ್ವವಿದ್ಯಾಲಯಗಳ ಸ್ಥಳೀಯ ವಿಚಾರಣೆ ಸಮಿತಿಗಳಿಗೆ ಸಿಂಡಿಕೇಟ್ ಸದಸ್ಯರನ್ನು ಸದಸ್ಯ /ಅಧ್ಯಕ್ಷರನ್ನಾಗಿ ನೇಮಿಸದೇ ಕೇವಲ ವಿಷಯ ಪರಿಣಿತರನ್ನು / ಶಿಕ್ಷಣ ತಜ್ಞರನ್ನು ನೇಮಿಸುವಂತೆ ಹಾಗೂ ಸಿಂಡಿಕೇಟ್ ಸದಸ್ಯರನ್ನು ಸ್ಥಳೀಯ ಪರಿಶೀಲನಾ ಸಮಿತಿಯ ಅಧ್ಯಕ್ಷರನ್ನಾಗಿ / ಸದಸ್ಯರನ್ನಾಗಿ ನೇಮಿಸದಿರಲು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳಿಗೆ ಸರ್ಕಾರದಿಂದ ಸುತ್ತೋಲೆ ಸಂಖ್ಯೆ: ಇಡಿ 94 ಯುಜಿವಿ 2022. ದಿನಾಂಕ: 24.11.2022ರಲ್ಲಿ ನಿರ್ದೇಶನ ನೀಡಲಾಗಿರುತ್ತದೆ. |
| (ಇ) | ಸಿಂಡಿಕೇಟ್ ಸದಸ್ಯರ ಅಧ್ಯಕ್ಷತೆಯಲ್ಲಿ ಎಲ್‌ಐಸಿಯ ಸಮಿತಿಗಳು ಸಂಯೋಜಿತ ಕಾಲೇಜುಗಳಿಗೆ ಭೇಟಿ ನೀಡಿದಾಗ ಕೇಳಿ ಬರುತ್ತಿರುವ ಅವ್ಯವಹಾರಗಳನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ: | |

| | | |
|---|---|---|
| (ಈ) | ಸಿಂಡಿಕೇಟ್ ಸದಸ್ಯರು ಸಮಿತಿಯಲ್ಲಿರುವುದರಿಂದ ಸರ್ಕಾರದ ಮತ್ತು ವಿಶ್ವವಿದ್ಯಾಲಯಗಳ ಮಾನದಂಡಗಳನ್ನು ಬಳಸಿ ಕಾಲೇಜುಗಳ ಮೌಲ್ಯಮಾಪನ ಸರಿಯಾಗಿ ನಡೆಯುತ್ತಿಲ್ಲಾ ಎಂಬ ಆರೋಪವಾಗಿದ್ದು, ಇದನ್ನು ನಿಯಂತ್ರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು? | ಕಾಲೇಜುಗಳ ಸಂಯೋಜನಾ ಪ್ರಸ್ತಾವನೆಗೆ ಸಂಬಂಧಿಸಿದಂತೆ ಯುಜಿಸಿ, ಎಐಸಿಟಿಇ ಮತ್ತು ಎನ್‌ಸಿಟಿಇ ಮಾರ್ಗಸೂಚಿಗಳನ್ನು ಒಳಗೊಂಡಂತೆ ರಾಜ್ಯ ಸರ್ಕಾರವು ಕಾಲೇಜುಗಳ ಜಮೀನು, ಸಿಬ್ಬಂದಿ, ಪ್ರಯೋಗಾಲಯ, ಮೂಲಧನ ನಿರ್ವಹಣೆ, ಗ್ರಂಥಾಲಯ, ಇತ್ಯಾದಿ ಮೂಲಸೌಕರ್ಯಗಳನ್ನು ಒಳಗೊಂಡಂತೆ ಮೌಲ್ಯಮಾಪನ ಮಾಡಲು ಆದೇಶ/ಸುತ್ತೋಲೆಗಳನ್ನು ಹೊರಡಿಸಿದ್ದು, ಅದರನ್ವಯ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಎಲ್‌ಐಸಿ ಕಮಿಟಿಯು ಪರಿಶೀಲಿಸಿ ಮೌಲ್ಯಮಾಪನಾಂಕಗಳನ್ನು UUCMS ಮುಖಾಂತರ ವಿಶ್ವವಿದ್ಯಾಲಯಕ್ಕೆ ಮತ್ತು ಸರ್ಕಾರಕ್ಕೆ ಸಲ್ಲಿಸಬೇಕಾಗಿರುವುದರಿಂದ ಈ ಪ್ರಕ್ರಿಯೆಯನ್ನು ಉಲ್ಲಂಘಿಸಿದ್ದಲ್ಲಿ ಸದರಿ ಕಾಲೇಜುಗಳು ಸಂಯೋಜನಾ ಮಂಜೂರಾತಿ ನೀಡಲು ಅವಕಾಶವಿರುವುದಿಲ್ಲ. |

**ಸಂಖ್ಯೆ**: ಇಡಿ 268 ಯುಎನ್‌ಇ 2025

(ಡಾ.ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು